ರವಾನೆ ಸಂಖ್ಯೆಃ ಆಡಳಿತ /4033/2026

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ,
ಚಾಮರಾಜನಗರ, ದಿನಾಂಕಃ 17.10.2026

ಕರೆ ಪತ್ರ

ಈ ಕಛೇರಿ ಅಧಿಸೂಚನೆ ಸಂಖ್ಯೆಃ ಎಡಿಎಮ್ಎನ್/03/2026, ದಿನಾಂಕ 27.07.2026 ರನ್ವಯ ನೀವು **ಬೆರಳಚ್ಚು-ನಕಲುಗಾರರ** ಹುದ್ದೆಗೆ ಅರ್ಜಿ ಸಲ್ಲಿಸಿರುವುದರ ಮೇರೆಗೆ, ಪಟ್ಟಿಯಲ್ಲಿ ಸೂಚಿಸಿರುವ ದಿನಾಂಕದಂದು ಬೆಳಿಗ್ಗೆ **09.00** ಘಂಟೆಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಚಾಮರಾಜನಗರ, ಇವರ ಕಛೇರಿಯಲ್ಲಿ ಮೂಲ ದಾಖಲಾತಿಗಳ ಪರಿಶೀಲನೆ, ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳನ್ನು ನಿಗಧಿಪಡಿಸಲಾಗಿದ್ದು, ನಿಮ್ಮ ಸ್ವಂತ ಖರ್ಚಿನಲ್ಲಿ ಸದರಿ ದಾಖಲಾತಿ ಪರಿಶೀಲನೆ ಹಾಗೂ ಬೆರಳಚ್ಚು ಪರೀಕ್ಷೆಗೆ ಹಾಜರಾಗತಕ್ಕದ್ದು.

ಮುಂದುವರೆದು, ನೀವು ಸಲ್ಲಿಸಿರುವ ಆನ್ಲೈನ್ ಅರ್ಜಿಯ ಜೊತೆಗೆ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮೂಲ ದಾಖಲಾತಿಗಳೊಡನೆ ಅವುಗಳ ದೃಢೀಕೃತ ಜೆರಾಕ್ಸ್ ಪ್ರತಿಗಳನ್ನು ಹಾಜರುಪಡಿಸತಕ್ಕದ್ದು. ಒಂದು ವೇಳೆ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಸರಿಯಾದ ದಾಖಲಾತಿಗಳನ್ನು ಹಾಜರುಪಡಿಸದೇ ಇದ್ದಲ್ಲಿ ಹಾಗೂ ಯಾವುದಾದರೂ ಲೋಪದೋಷಗಳು ಕಂಡುಬಂದಲ್ಲಿ ನಿಮ್ಮನ್ನು ನೇಮಕಾತಿಯ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

(ಪ್ರಭಾವತಿ ಜಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಚಾಮರಾಜನಗರ

ಅರ್ಹ ಅಭ್ಯರ್ಥಿಗಳ ಪಟ್ಟಿಗಳನ್ನು ಈ ಕೆಳಕಂಡಂತೆ ಲಗತ್ತಿಸಲಾಗಿದೆ.